ಕರ್ನಾಟಕ ಸರ್ಕಾರ

ಸಂಖ್ಯೆ: ಡಿಟಿಇ 427 ಎಸಿಎಂ(2) 2016-17

ನಿರ್ದೇಶಕರವರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ:26-07-2017.

-:: ಸು ತ್ತೋಲೆ ::-

ವಿಷಯ: ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳ ಕೋರ್ಸುಗಳಲ್ಲಿ SNQ (Supernumerary Seats) ಕೋಟಾದಡಿ ಖಾಲಿ ಉಳಿದಿರುವ ಸೀಟುಗಳನ್ನು ಆಫ್-ಲೈನ್ ಮುಖಾಂತರ ಭರ್ತಿ ಮಾಡದಿರುವ ಬಗ್ಗೆ.

ಉಲ್ಲೇಖ:
1. ಈ ಕಛೇರಿ ಪ್ರವೇಶಾಧಿಸೂಚನೆ ಪತ್ರ ಸಂ. ಡಿಟಿಇ/427/ಎಸಿಎಂ(2)/2016-17, ದಿ:09-05-2017.
2. ಈ ಕಛೇರಿ ಸುತ್ತೋಲೆ ಸಂ. ಡಿಟಿಇ/427/ಎಸಿಎಂ(2)/2016-17, ದಿ:15-07-2017.
3. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ಪತ್ರ ದಿ:26-07-2017.

-000000-

2017-18ನೇ ಸಾಲಿನಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯವತಿಯಿಂದ ಎಸ್.ಎಸ್.ಎಲ್.ಸಿ ಪಾಸಾದ ಅಭ್ಯರ್ಥಿಗಳಿಗೆ ಪ್ರಥಮ ಡಿಪ್ಲೋಮಾ ಪ್ರವೇಶಕ್ಕೆ ಸಂಬಂಧಿಸಿದಂತೆ ಉಲ್ಲೇಖದ ಈ ಕಛೇರಿ ಪ್ರವೇಶಾಧಿಸೂಚನೆಯನ್ವಯ **ಆನ್‌ಲೈನ್ ಇಂಟರಾಕ್ಟೀವ್ ಕೌನ್ಸಲಿಂಗ್** ಮೂಲಕ ರಾಜ್ಯದ 19 **ಆನ್‌ಲೈನ್ ಇಂಟರಾಕ್ಟೀವ್ ಕೌನ್ಸಲಿಂಗ್/ಪ್ರವೇಶ ಘಟಕಗಳಲ್ಲಿ** ಪ್ರವೇಶ ಪ್ರಕ್ರಿಯೆಯನ್ನು ಪೂರ್ಣಗೊಳಿಸಲಾಗಿರುತ್ತದೆ.

ಉಲ್ಲೇಖ(3)ರ ಈ ಕಛೇರಿ ಸುತ್ತೋಲೆ ಪತ್ರದಲ್ಲಿ ರಾಜ್ಯದ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳ ಕೋರ್ಸುಗಳಲ್ಲಿ ಖಾಲಿ ಉಳಿದಿರುವ ಸೀಟುಗಳನ್ನು **ಆಯಾ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಾಂಶುಪಾಲರು ತಮ್ಮ ಹಂತದಲ್ಲಿಯೇ** ಎಸ್.ಎಸ್.ಎಲ್.ಸಿ ಯಲ್ಲಿ ಉತ್ತೀರ್ಣರಾದ ಹಾಗೂ ಎಸ್‌ಎಸ್‌ಎಲ್‌ಸಿ ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅರ್ಹ ಅಭ್ಯರ್ಥಿಗಳಿಗೂ **ಆಫ್-ಲೈನ್** ಮುಖಾಂತರ ಅರ್ಜಿಗಳನ್ನು ವಿತರಿಸಿ ಹಾಗೂ ಮೆರಿಟ್ ಪಟ್ಟಿ ತಯಾರಿಸಿ ಅಭ್ಯರ್ಥಿಗಳ ಮೆರಿಟ್ ಆಧಾರದ ಮೇಲೆ ಸೀಟುಗಳನ್ನು ರೋಸ್ಟರ್ ಅನುಗುಣವಾಗಿ ನಿಯಮಗಳನ್ನು ಪಾಲಿಸಿ ತುಂಬಲು ವಿದ್ಯಾರ್ಥಿಗಳ ಶೈಕ್ಷಣಿಕ ಹಾಗೂ ಸಾರ್ವಜನಿಕರ ಹಿತದೃಷ್ಟಿಯ ಮೇರೆಗೆ ಅವಧಿಯನ್ನು ವಿಸ್ತರಿಸಿ ಅನುಮತಿ ನೀಡಲಾಗಿರುತ್ತದೆ.

ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳ ಕೋರ್ಸುಗಳಲ್ಲಿ ಆಯಾ ಕೋರ್ಸಿನಲ್ಲಿ SNQ (Supernumerary Seats) ಕೋಟಾದಡಿ ಖಾಲಿ ಉಳಿದಿರುವ ಸೀಟುಗಳನ್ನು **ಆಫ್-ಲೈನ್ ಮುಖಾಂತರ ಭರ್ತಿ ಮಾಡದಿರಲು ಈ ಮೂಲಕ ಸೂಚಿಸಲಾಗಿದೆ.** ಪ್ರಯುಕ್ತ, ಇದನ್ನು ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ **080-2235 6949** ದೂರವಾಣಿಯನ್ನು ಸಂಪರ್ಕಿಸುವುದು.

ನಿರ್ದೇಶಕರು

*ರಾಜ್ಯದ ಸರ್ಕಾರಿ / ಅನುದಾನಿತ ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ*

**ಪ್ರತಿ:**

1. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು
2. ಜಂಟಿ ನಿರ್ದೇಶಕರು(ಪರೀಕ್ಷೆ), ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು
3. ಸಂಯೋಜನಾಧಿಕಾರಿಗಳು, ಇ–ಆಡಳಿತ, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು – ಸದರಿ ಪತ್ರಿಕಾ ಪ್ರಕಟಣೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
4. ನಿರ್ದೇಶಕರ ಆಪ್ತಶಾಖೆಗೆ.